ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1257
ಸದಸ್ಯರ ಹೆಸರು : ಶ್ರೀ ಕೆ.ವಿ. ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ : 22-09-2021
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಖಾನೇಷುಮಾರಿ ಅಥವಾ ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಕಂದಾಯ ಇಲಾಖೆಯು ಈ ಹಿಂದೆ ನಿರ್ವಹಿಸುತ್ತಿದ್ದ ದಾಖಲೆಗಳ ವಿಧಗಳು ಯಾವುವು;	ಖಾನೇಷುಮಾರಿ ಅಥವಾ ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಲ್ಲಿ ಯಾವುದೇ ದಾಖಲೆಗಳನ್ನು ನಿರ್ವಹಿಸುತ್ತಿರುವುದಿಲ್ಲ. ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸುತ್ತಿರುತ್ತಾರೆ.
ಆ)	ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸೋಮಶೆಟ್ಟಿಹಳ್ಳಿ ಗ್ರಾಮದ ಯಾವ ವಿಧದ ಖಾನೇಷುಮಾರಿ ದಾಖಲೆಗಳನ್ನು ಪಂಚಾಯತ್ ರಾಜ್ ಇಲಾಖೆಯ ಯಾವ ಅಧಿಕಾರಿಗೆ ಹಸ್ತಾಂತರ ಮಾಡಲಾಯಿತು;	ಈ ಹಿಂದೆ ಅಬ್ಬಿಗೆರೆ ಗ್ರಾಮ ಪಂಚಾಯಿತಿಯು ಅಸ್ತಿತ್ವದಲ್ಲಿದ್ದು, ಅಬ್ಬಿಗೆರೆ ಗ್ರಾಮ ಪಂಚಾಯಿತಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರ್ಪಡೆಯಾದ ನಂತರ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿಯು ಹೊಸದಾಗಿ ಅಸ್ತಿತ್ವಕ್ಕೆ ಬಂದಿರುತ್ತದೆ. ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿಗೆ ಸೇರಿದ ದಾಖಲೆಗಳನ್ನು ಸಂಬಂಧಪಟ್ಟ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿಯವರಿಗೆ ಹಸ್ತಾಂತರಿಸಿರುತ್ತಾರೆ.
ಇ)	ಹಸ್ತಾಂತರವಾಗದ ಉಳಿದಿರುವ ಇತರೆ ದಾಖಲೆಗಳು ಯಾವುವು; ಹಸ್ತಾಂತರವಾಗದ ದಾಖಲೆಗಳನ್ನು ಯಾವ ಕಾರ್ಯಾಲಯದಲ್ಲಿ ಸಂರಕ್ಷಿಸಿಡಲಾಗಿದೆ;	ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಲಕ್ಷ್ಮೀಪುರ ಗ್ರಾಮವು ಚಿಕ್ಕಬಾಣಾವರ ಪುರಸಭೆಗೆ ಸೇರ್ಪಡೆಯಾಗದಿರುವ ಕಾರಣದಿಂದಾಗಿ ಸದರಿ ಗ್ರಾಮಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹಸ್ತಾಂತರಿಸಲಾಗಿರುವುದಿಲ್ಲ. ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಕಛೇರಿಯ ಕಟ್ಟಡದಲ್ಲಿಯೇ ಸದರಿ ದಾಖಲೆಗಳನ್ನು ಸಂರಕ್ಷಿಸಿ ಇಡಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಇವರು ವರದಿ ಮಾಡಿರುತ್ತಾರೆ.
ಈ)	ಸೋಮಶೆಟ್ಟಿಹಳ್ಳಿ ಗ್ರಾಮದ ಖಾನೇಷುಮಾರಿ ಆಸ್ತಿ ಸಂಖ್ಯೆ 1 ರಿಂದ 10 ವರೆಗಿನ ದಾಖಲೆಗಳ ನಕಲು ಪ್ರತಿಯನ್ನು ನೀಡುವುದು.	ಈಗಾಗಲೇ ಸದರಿ ಗ್ರಾಮವು ಚಿಕ್ಕಬಾಣಾವರ ಪುರಸಭೆಗೆ ಹಸ್ತಾಂತರಿಸಿರುವುದರಿಂದ ಸದರಿ ದಾಖಲೆಗಳ ನಕಲು ಪ್ರತಿಗಳು ಲಭ್ಯವಿರುವುದಿಲ್ಲವೆಂದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ಇವರು ವರದಿ ಮಾಡಿರುತ್ತಾರೆ.

ಸಂಖ್ಯೆ: ಆರ್‌ಡಿ 181 ಎಲ್‌ಜಿಕ್ಯೂ 2021

(ಆರ್. ಅಶೋಕ)
ಕಂದಾಯ ಸಚಿವರು